RNU AIR DHARWAD

JUNE 02, 2026

# AKASHAVANI - DHARWAD
# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ, ಸಣ್ಣ ಹಾಗೂ ಬೀದಿ ಬದಿ ವ್ಯಾಪಾರಿಗಳ ಸಹಾಯಕ್ಕಾಗಿ ಪ್ರಾರಂಭಿಸಿದ, ಪಿಎಂ ಸ್ವನಿಧಿ ಯೋಜನೆಗೆ 6 ವ ೯ಗಳು ಪೂರ್ಣಗೊಂಡಿವೆ. 2020 ರಲ್ಲಿ ಆರಂಭಗೊಂಡ, ಪಿಎಂ ಸ್ವನಿಧಿ ಯೋಜನೆಯಡಿ, ಇದುವರೆಗೆ 75 ಲಕ್ಷಕ್ಕೂ ಅಧಿಕ ಬೀದಿ ಬದಿ ವ್ಯಾಪಾರಿಗಳು ಪ್ರಯೋಜನ ಪಡೆದಿದ್ದಾರೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಸಂಸದರು, ಸುಮಾರು 17 ಸಾವಿರದ 800 ಕೋಟಿ ರೂಪಾಯಿಗೂ ಅಧಿಕ ಆರ್ಥಿಕ ನೆರವು ಫಲಾನುಭವಿಗಳಿಗೆ ದೊರೆತಿದೆ ಎಂದು ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ನಗರದ, ಪಿ.ಎಂ ಸ್ವನಿಧಿ ಯೋಜನೆ ಫಲಾನುಭವಿ, ಬೀದಿ ಬದಿ ವ್ಯಾಪಾರಸ್ಥ, ಅಸ್ಲಂ ಪಾಶಾ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ಅಸ್ಲಂ ಪಾಶಾ ಧ್ವನಿ– 29 ಸೆಕೆಂದುಗಳು

<><><>

ಪಿ.ಎಂ ಸ್ವನಿಧಿ ಯೋಜನೆಯಡಿ, ಶೇಕಡ 46 ರಷ್ಟು ಮಹಿಳಾ ಫಲಾನುಭವಿಗಳಿದ್ದಾರೆ, 841 ಕೋಟಿ ರೂಪಾಯಿಗಿಂತಲೂ ಅಧಿಕ ಡಿಜಿಟಲ್ ವಹಿವಾಟಿನ ಮೂಲಕ, ಸಣ್ಣ ವ್ಯಾಪಾರಿಗಳು ಡಿಜಿಟಲ್ ಕ್ರಾಂತಿಯ ಮುಂಚೂಣಿಯಲ್ಲಿದ್ದಾರೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಸಾಮಾಜಿಕ ಜಾಲತಾಣದ ಮೂಲಕ ತಿಳಿಸಿದ್ದಾರೆ.

<><><>

ವಿಕಸಿತ ಭಾರತ–ಜಿ ರಾಮ್ ಜಿ ಕಾಯಿದೆ, ಜುಲೈ 1 ರಿಂದ ಅನುಷ್ಠಾನಗೊಳಿಸಲಾಗುವುದು ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ನಿಟ್ಟಿನಲ್ಲಿ ಯೋಜನೆ ಜಾರಿಗಾಗಿ ಗ್ರಾಮೀಣಾಭಿವೃದ್ಧಿ ಇಲಾಖೆ ಸಿದ್ಧತೆ ನಡೆಸಿದೆ. ಬಿತ್ತನೆ ಹಾಗೂ ಸುಗ್ಗಿ ಕಾಲದಲ್ಲಿ, ಒಟ್ಟು 60 ದಿನ, ಕೃಷಿ ಕಾರ್ಮಿಕರ ಲಭ್ಯತೆ ಖಾತ್ರಿಪಡಿಸಲು, ವಿಬಿ ಜಿ–ರಾಮ್ ಜಿ ಅಡಿ ಕಾಮಗಾರಿಯನ್ನು ಕೈಗೊಳ್ಳಬಾರದು ಎಂದು ಹೊಸ ಕಾಯಿದೆಯಲ್ಲಿ ತಿಳಿಸಲಾಗಿದೆ.

<><><>

ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರಾಗಿ, ಆಯ್ಕೆಯಾಗಿರುವ ಡಿ.ಕೆ ಶಿವಕುಮಾರ, ನಾಳೆ ಬುಧವಾರ, ಸಂಜೆ 4 ಗಂಟೆ 5 ನಿಮಿಷಕ್ಕೆ ಬೆಂಗಳೂರಿನ ಲೋಕಭವನದಲ್ಲಿ ರಾಜ್ಯದ 18 ನೇ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಪ್ರಸ್ತುತ, ಹೊಸದಿಲ್ಲಿಯಲ್ಲಿ ಸಚಿವ ಸಂಪುಟ ರಚನೆ ಕುರಿತು ಚರ್ಚೆಗಳು ನಡೆಯುತ್ತಿದೆ.

<><><>

ಜಂಟಿ ಪ್ರವೇಶ ಪರೀಕ್ಷೆ– ಜೆಇಇ ಅಡ್ವಾನ್ಸ್ ಫಲಿತಾಂಶ ಪ್ರಕಟಗೊಂಡಿದೆ. ಬೆಂಗಳೂರಿನ ಆರ್ಯನ್ ರಘುಪತಿ ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದ್ದಾರೆ. ಅಖಿಲ ಭಾರತ ಮಟ್ಟದಲ್ಲಿ ಅವರು, 12 ನೇ ಸ್ಥಾನಕ್ಕೆ ಭಾಜನರಾಗಿದ್ದಾರೆ.

<><><>

ಬಳ್ಳಾರಿ ಜಿಲ್ಲೆ, ತೆಕ್ಕಲಕೋಟೆ, ನಿಟ್ಟೂರು, ಉಡೇಗೋಲ ಸೇರಿದಂತೆ, ಸಮೀಪವರ್ತಿ ಪ್ರದೇಶಗಳಲ್ಲಿ ಪತ್ತೆಯಾದ ಪುರಾತನ ಶಾಸನಗಳ ಡಿಜಿಟಲೀಕರಣ ಪ್ರಕ್ರಿಯೆಯನ್ನು, ಭಾರತಶ್ರೀ ಯೋಜನೆ ಅಡಿ ಕೈಗೊಳ್ಳಲಾಗುವುದು ಎಂದು ಮೈಸೂರು, ಪುರಾತತ್ವ ಸರ್ವೇಕ್ಷಣಾ ಇಲಾಖೆ ಸಹಾಯಕ ಅಧೀಕ್ಷಕ ಆರ್.ವಿ ಅನಿಲ್ ಕುಮಾರ ತಿಳಿಸಿದ್ದಾರೆ.

<><><>

ಕರ್ನಾಟಕ ರಾಜ್ಯಾದ್ಯಂತ, ಮುಂದಿನ 7 ದಿನಗಳ ಕಾಲ, ಒಣಹವೆ ಹಾಗೂ ಬಿಸಿಲಿನ ವಾತಾವರಣ ಮುಂದುವರಿಯಲಿದೆ. ನಾಳೆಯಿಂದ, 5 ನೇ ತಾರೀಖಿನವರೆಗೆ ಒಳನಾಡು ಮತ್ತು ಮಲೆನಾಡು ಜಿಲ್ಲೆಗಳಲ್ಲಿ, ಅಲ್ಲಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

ಆಲಿಕಲ್ಲು ಮಳೆ ಹಾಗೂ ಬಿರುಗಾಳಿಗೆ ನ ಷ್ಟವಾಗಿರುವ ಬೆಳೆಗಳ ಸಮೀಕ್ಷೆ ಮಾಡಿ, ಪ್ರತಿ ಎಕರೆಗೆ 2 ಲಕ್ಷ ರೂಪಾಯಿ, ಕೋಳಿಫಾರಂ, ಪಾಲಿಹೌಸ್ ಮತ್ತು ನೆಟ್ ಹೌಸ್‌ಗೆ 25 ಲಕ್ಷ ರೂಪಾಯಿ ಪರಿಹಾರ ವಿತರಣೆ ಮಾಡಬೇಕು ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಒತ್ತಾಯಿಸಿದ್ದಾರೆ. ಕೋಲಾರ ಜಿಲ್ಲೆಯಾದ್ಯಂತ ಕಳೆದ ಒಂದು ವಾರದಿಂದ ಸುರಿದ ಆಲಿಕಲ್ಲು ಮಳೆಗೆ, ಮಾವು ಸೇರಿದಂತೆ ತೋಟಗಾರಿಕೆ ಬೆಳೆಗಳು ನ ಷ್ಟವಾಗಿದೆ. ಸರ್ಕಾರ ತಕ್ಷಣ ಸೂಕ್ತ ಪರಿಹಾರ ನೀಡಿ, ರೈತರ ರಕ್ಷಣೆಗೆ ನಿಲ್ಲಬೇಕಿದೆ ಎಂದು ಮನವಿ ಮಾಡಿದ್ದಾರೆ.

<><><>

ಮೈಸೂರು, ಹುಣಸೂರು ಹಾಗೂ ಪಿರಿಯಾಪಟ್ಟಣ ತಾಲೂಕು ಒಳಗೊಂಡಂತೆ, ಹಲವು ಪ್ರಮುಖ ರಸ್ತೆ ಅಭಿವೃದ್ಧಿ ಹಾಗೂ ಸುಧಾರಣ ಕಾಮಗಾರಿಗಾಗಿ, ಕೇಂದ್ರ ರಸ್ತೆ ನಿಧಿ ಮೂಲಕ 50 ಕೋಟಿ ರೂಪಾಯಿ ಮಂಜೂರಾಗಿದೆ ಎಂದು ಮೈಸೂರು–ಕೊಡಗು ಸಂಸದ ಯದುವೀರ ಒಡೆಯರ್ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ಗ್ರಾಮೀಣ ಸಂಪರ್ಕ ಸೇರಿದಂತೆ, ಸಮಗ್ರ ಪ್ರಾದೇಶಿಕ ಅಭಿವೃದ್ಧಿ ಅಗತ್ಯವಾಗಿದೆ. ಮತ್ತಷ್ಟು ಅಭಿವೃದ್ಧಿ ಯೋಜನೆಗಳನ್ನು ತರಲು ತಾವು ಬದ್ಧರಾಗಿರುವುದಾಗಿ ತಿಳಿಸಿದ್ದಾರೆ.

<><><>

ಕೇಂದ್ರ ರೇಲ್ವೆ ಖಾತೆ ಸಚಿವ, ಅಶ್ವಿನಿ ವೈಷ್ಣವ್ ಅವರನ್ನು, ಇಂದು ಹೊಸದಿಲ್ಲಿಯಲ್ಲಿ ಭೇಟಿ ಮಾಡಿರುವ, ಸಂಸದ ಯದುವೀರ ಒಡೆಯರ್, ಚನ್ನೈನಿಂದ ಮೈಸೂರಿಗೆ ಹೈ ಸ್ಪೀಡ್ ರೈಲು ಸಂಪರ್ಕ ವಿಸ್ತರಣೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿದ್ದಾರೆ.

<><><>

ಹುಬ್ಬಳ್ಳಿ–ಎಸ್.ಎಸ್.ಎಸ್ ರೈಲು ನಿಲ್ದಾಣ ಹಾಗೂ ಡಾಕ್ಟರ ಎಂ.ಜಿ.ಆರ್ ಚನ್ನೈ ಸೆಂಟ್ರಲ್ ಮಧ್ಯೆ, ದ್ವೈ ಸಾಪ್ತಾಹಿಕ ಎಕ್ಸಪ್ರೆಸ್ ರೈಲು, ಈ ತಿಂಗಳ 19 ರಂದು ಶುಕ್ರವಾರ ಗುಂಟಕಲ್, ಧರ್ಮಾವರಂ, ಕಟ್ಪಾಡಿ ಮೂಲಕ ಸಾಗಲಿದೆ ಎಂದು ನೈಋತ್ಯ ರೇಲ್ವೆ ಪ್ರಕಟಣೆ ತಿಳಿಸಿದೆ.

<><><>

ಬೆಳಗಾವಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ, ಚುನಾವಣಾ ಆಯೋಗದ ನಿರ್ದೇಶನದಂತೆ, 40 ಮೇಲ್ವಿಚಾರಕರ ಮೂಲಕ ಮತದಾರರ ಪಟ್ಟಿಯ ವಿಶೇ ’ ಸಮಗ್ರ ಪರಿ ್ಕರಣೆ– ಎಸ್.ಐ.ಆರ್ ಕಾರ್ಯ ಪ್ರಗತಿಯಲ್ಲಿದೆ, ಈಗಾಗಲೇ ಶೇಕಡ 90 ರ ್ಟ ಗುರಿ ತಲುಪಲಾಗಿದೆ ಎಂದು ಪಾಲಿಕೆ ಆಯುಕ್ತ ಕಾರ್ತಿಕ್ ಎಂ. ತಿಳಿಸಿದ್ದಾರೆ. ಮಹಾನಗರಪಾಲಿಕೆ ಸಭಾಂಗಣದಲ್ಲಿ ಆಯೋಜಿತ ಸಭೆಯಲ್ಲಿ ಮಾತನಾಡಿದ ಅವರು, ಉತ್ತರ, ದಕ್ಷಿಣ ಎರಡೂ ಕ್ಷೇತ್ರ ಸೇರಿ ಒಟ್ಟು 514 ಮತಗಟ್ಟೆ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>